# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ 33 /23-24

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 20.3.24

## ಕಛೇರಿ ಆದೇಶ

ವಿಷಯ: ಶ್ರೀಮತಿ ಮೋನಿಕ ಕೆ. ಜೆ, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಶ್ರೀಮತಿ ಮೋನಿಕ ಕೆ. ಜೆ, ಸಹಾಯಕ ಅಭಿಯಂತರರು ರವರ ಮನವಿ ದಿನಾಂಕ: 15-03-2023
2) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀಮತಿ ಮೋನಿಕ ಕೆ. ಜೆ, ಸಹಾಯಕ ಅಭಿಯಂತರರು, ಜಲ ಸಂಪನ್ಮೂಲ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ನಿಯೋಜನೆಗೊಂಡು ಸಹಾಯಕ ನಿರ್ದೇಶಕರು (ನಗರಯೋಜನೆ-ಪಶ್ಚಿಮ) ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ನಿಯೋಜನಾ ಅವಧಿಯು ಮುಕ್ತಾಯಗೊಂಡಿದ್ದು ಹಾಗೂ ಸದರಿ ಅಭಿಯಂತರರು ಉಲ್ಲೇಖ-(2)ರಂತೆ ಮನವಿ ಸಲ್ಲಿಸಿ, ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಲು ಕೋರಿರುವುದರಿಂದ, ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ಈ ತಕ್ಷಣದಿಂದ ಜಾರಿಗೆ ಬರುವಂತೆ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ, ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ವಶಕ್ಕೆ ನೀಡಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ .
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ .
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ , ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ .
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ .
5. ವಾಕಿ ಟಾಕಿ , ಮೊಬೈಲ್ ಫೋನ್ , ಸಿಮ್ ಕಾರ್ಡ್ , ಹೆಲ್ಮ್ಯಾರ್ಡ್ , ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ .

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(2)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

ಪ್ರತಿಯನ್ನು:

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಲಯ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
: ಜಂಟಿ ಆಯುಕ್ತರು (ಪಶ್ಚಿಮ) ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
: ಮುಖ್ಯ ಅಭಿಯಂತರರು (ಪಶ್ಚಿಮ) ವಿಭಾಗ ರವರಿಗೆ ಕಳುಹಿಸಿದೆ.
: ಸಹಾಯಕ ನಿರ್ದೇಶಕರು (ನಗರಯೋಜನೆ-ಪಶ್ಚಿಮ) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
: ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ಪಶ್ಚಿಮ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.